## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿನ star classified hotel ಗಳನ್ನು "ಕೈಗಾರಿಕೆ" ಎಂದು ಪರಿಗಣಿಸುವ ಬಗ್ಗೆ.

**ಓದಲಾಗಿದೆ:**
1. ಪ್ರವಾಸೋದ್ಯಮ ಇಲಾಖೆಯ ಕಡತ ಸಂಖ್ಯೆ ಟಿಓಆರ್ 162 ಟಡಿಓ 2020.
2. ದಿನಾಂಕ 18.02.2021 ರಂದು ನಡೆದ ಸಚಿವ ಸಂಪುಟ ಸಭೆಯ ಅನುಮೋದನೆ.

**=000=**

**ಪ್ರಸ್ತಾವನೆ:**

ಪ್ರವಾಸೋದ್ಯಮ ವಲಯದಲ್ಲಿ ಕರ್ನಾಟಕವು ಪ್ರಮುಖ ರಾಜ್ಯವಾಗಿದ್ದು, ಭಾರತದಲ್ಲಿ ದೇಶಿ ಪ್ರವಾಸಿಗರನ್ನು ಆಕರ್ಷಿಸುವುದರಲ್ಲಿ 3ನೇ ಸ್ಥಾನದಲ್ಲಿದ್ದು, ರಾಜ್ಯದಲ್ಲಿ ಪಾರಂಪರಿಕ, ನೈಸರ್ಗಿಕ, ಕರಾವಳಿ, ಆಧ್ಯಾತ್ಮಿಕ, ಅರಣ್ಯ ಹಾಗೂ ಸಾಹಸಿ ಪ್ರವಾಸಿ ಸ್ಥಳಗಳನ್ನು ಒಳಗೊಂಡಂತೆ ಸುಮಾರು 778 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆ. ಪ್ರವಾಸೋದ್ಯಮ ವಲಯವು ರಾಜ್ಯದ ಆರ್ಥಿಕತೆಗೆ ಪ್ರಮುಖ ವಲಯವಾಗಿದ್ದು, GSDP ಗೆ ಶೇ.14.8 ರಷ್ಟು ಕೊಡುಗೆ ನೀಡುತ್ತಿದೆ ಹಾಗೂ ಅಂದಾಜು 30 ಲಕ್ಷ ಉದ್ಯೋಗಗಳನ್ನು ರಾಜ್ಯದಾದ್ಯಂತ ಸೃಷ್ಟಿಸಿದೆ.

ರಾಜ್ಯದಲ್ಲಿ ಪ್ರವಾಸೋದ್ಯಮಕ್ಕೆ ಉತ್ತಮವಾದ ಮೂಲಭೂತ ಸೌಲಭ್ಯ ಹಾಗೂ ಒಳ್ಳೆಯ ಸಂಪರ್ಕ ರಸ್ತೆಗಳು ಹೊಂದಿರುವುದರಿಂದ ರಾಜ್ಯದ ಆರ್ಥಿಕತೆ ಹಾಗೂ ಪ್ರವಾಸೋದ್ಯಮದಿಂದ ಆತಿಥ್ಯ ಕ್ಷೇತ್ರವು ಬೆಳವಣಿಗೆಯಾಗುತ್ತಿದೆ.

ಹಲವಾರು ಸಂಶೋಧನೆ ಅಧ್ಯಯನಗಳನ್ವಯ ಆತಿಥ್ಯ ವಲಯವು ಕೋವಿಡ್-19 ರ ಮುಂಚಿನ ಹಂತಕ್ಕೆ ತಲುಪಲು 2023 ಅಥವಾ ನಂತರದ ಕಾಲಾವಧಿ ಅವಶ್ಯಕವಿದೆ ಎಂದು ತಿಳಿಸಿವೆ. ರಾಜ್ಯದಲ್ಲಿ ಆತಿಥ್ಯ ವಲಯದ ಪುನರುಜ್ಜೀವನಕ್ಕಾಗಿ ಸರ್ಕಾರವು ಮಧ್ಯ ಪ್ರವೇಶಿಸಬೇಕಾಗಿದ್ದು,ಇದಕ್ಕಾಗಿ ಪ್ರವಾಸೋದ್ಯಮ ಇಲಾಖೆಯು ಆತಿಥ್ಯ ವಲಯಕ್ಕೆ ಕೈಗಾರಿಕಾ ಸ್ಥಾನಮಾನ ನೀಡಲು ಪ್ರಸ್ತಾಪಿಸಿದೆ.

ರಾಜ್ಯದಲ್ಲಿರುವ star classified hotel ಗಳಿಗೆ ಕೈಗಾರಿಕಾ ಸ್ಥಾನಮಾನ ನೀಡಿದಲ್ಲಿ, ರಾಜ್ಯದ ಆತಿಥ್ಯ ವಲಯಕ್ಕೆ ಉತ್ತೇಜನ ನೀಡಿದಂತಾಗಿ ಹೆಚ್ಚಿನ ಬಂಡವಾಳ ಆಕರ್ಷಿಸಲಾಗುವುದಲ್ಲದೆ, ಕೋವಿಡ್-19ರ ಸಾಂಕ್ರಾಮಿಕ ರೋಗದಿಂದ ಉಂಟಾದ ಸವಾಲುಗಳನ್ನು ಎದುರಿಸಿ ಆತಿಥ್ಯ ವಲಯವು ಸ್ಥಿರಗೊಳ್ಳುವುದು.

ಹೋಟೆಲ್ ಅಸೋಸಿಯೇಷನ್ ಆಫ್ ಇಂಡಿಯಾ ಇವರು ದಿನಾಂಕ 10.11.2020 ರಂದು ಸಲ್ಲಿಸಿರುವ ಮನವಿಯಲ್ಲಿ ಆತಿಥ್ಯ ವಲಯಕ್ಕೆ ಕೈಗಾರಿಕೆ ಸ್ಥಾನಮಾನವನ್ನು ನೀಡಿದ್ದಲ್ಲಿ ಹೋಟೆಲ್‌ಗಳು ಕೈಗಾರಿಕೆಗಳಂತೆ ಈ ಕೆಳಕಂಡ ಸೌಲಭ್ಯಗಳನ್ನು ಪಡೆಯಬಹುದಾಗಿದೆ ಎಂದು ತಿಳಿಸಿರುತ್ತಾರೆ.

1. ಕಡಿಮೆ ವಿದ್ಯುಚ್ಛಕ್ತಿ ದರ
2. ಕಡಿಮೆ ಆಸ್ತಿ ತೆರಿಗೆ
3. ಚಾಲ್ತಿಯಲ್ಲಿರುವ ಸಾಲಕ್ಕೆ ಮರು ಹಣಕಾಸಿನ ಸೌಲಭ್ಯ
4. ಸಾಲಗಳಿಗೆ ವಿಧಿಸುವ ಬಡ್ಡಿಯಲ್ಲಿ ಸಬ್ಸಿಡಿಯನ್ನು ಸುಲಭವಾಗಿ ಪಡೆಯುವುದು
5. ಕಡಿಮೆ ತೆರಿಗೆ ದರ
6. ಹೋಟೆಲ್ ಯೋಜನೆಗಳಿಗೆ ಪರವಾನಿಗೆ ಮತ್ತು ಚಾಲನೆ ನೀಡುವ ಪ್ರಕ್ರಿಯೆಯನ್ನು ಸರಳೀಕರಿಸುವುದು

ಹೋಟೆಲ್ ಅಸೋಸಿಯೇಷನ್ ಆಫ್ ಇಂಡಿಯಾ ಇವರು ಆತಿಥ್ಯ ವಲಯಕ್ಕೆ ಕೈಗಾರಿಕೆ ಸ್ಥಾನಮಾನವನ್ನು ನೀಡುವ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 01.02.2021 ರಂದು ಆರ್ಥಿಕ, ನಗರಾಭಿವೃದ್ಧಿ, ಮೂಲಸೌಲಭ್ಯ ಅಭಿವೃದ್ಧಿ, ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳೊಂದಿಗೆ ನಡೆಸಿದ ಸಭೆಯಲ್ಲಿ star classified hotel ಗಳಿಗೆ ಕೈಗಾರಿಕಾ ಸ್ಥಾನಮಾನವನ್ನು ನೀಡಲು ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಪಡೆಯುವ ಹಾಗೂ ಈ ಸಂಬಂಧವಾಗಿ ಆದೇಶವನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಹೊರಡಿಸಲು ತೀರ್ಮಾನಿಸಲಾಗಿರುತ್ತದೆ.

ಅದರಂತೆ, ರಾಜ್ಯದ ಆತಿಥ್ಯ ವಲಯ/ ಪ್ರವಾಸೋದ್ಯಮ ವಲಯವು ಎದುರಿಸಿರುವ ಎಲ್ಲಾ ಸಮಸ್ಯೆ/ ವಿರೋಧಗಳನ್ನು ಪರಿಗಣಿಸಿ ಪ್ರವಾಸೋದ್ಯಮ ನಿರ್ದೇಶನಾಲಯವು ಪ್ರಸ್ತುತ ಕರ್ನಾಟಕದಲ್ಲಿ ನೋಂದಣಿಯಾಗಿರುವ 62 star classified hotel ಗಳಿಗೆ ಹಾಗೂ ಮುಂದಿನ ದಿನಗಳಲ್ಲಿ ನೋಂದಣಿಯಾಗುವ star classified hotel ಗಳಿಗೆ ಕೈಗಾರಿಕಾ ಸ್ಥಾನಮಾನ ನೀಡಲು ಪ್ರಸ್ತಾಪಿಸಿದ್ದು, ಇದರಿಂದಾಗಿ ಹೋಟೆಲ್‌ಗಳು ವಿದ್ಯುಚ್ಛಕ್ತಿ ದರ ಹಾಗೂ ಆಸ್ತಿ ತೆರಿಗೆಯಲ್ಲಿ ಈ ಕೆಳಕಂಡ ಅನುಕೂಲಗಳನ್ನು ಪಡೆಯಲು ಸಮಕಾಲೀನ ಆತಿಥ್ಯ ಸೌಲಭ್ಯಗಳನ್ನು ಹೊಂದಿರುವ star classified hotel ಗಳು ಮಾತ್ರ ಅರ್ಹತೆ ಹೊಂದುವುದು.

1. **ವಿದ್ಯುಚ್ಛಕ್ತಿ ದರ** : 5 ವರ್ಷಗಳ ವಿದ್ಯುಚ್ಛಕ್ತಿ ದರ ರಿಯಾಯಿತಿ
   (ವಾಣಿಜ್ಯ ಬಳಕೆ ದರ ಮತ್ತು ಕೈಗಾರಿಕೆ ಬಳಕೆ ದರ ನಡುವಿನ ವ್ಯತ್ಯಾಸ ಮಾತ್ರ)

2. **ಆಸ್ತಿ ತೆರಿಗೆ** : 5 ವರ್ಷಗಳ ಆಸ್ತಿ ತೆರಿಗೆ ರಿಯಾಯಿತಿ
   (star classified hotel ಕಟ್ಟಡಗಳಿಗೆ ನಿಗದಿಪಡಿಸಿರುವ ಹಾಗೂ ಒಂದು ಕೈಗಾರಿಕಾ ಘಟಕದ ಕಟ್ಟಡಕ್ಕೆ ನಿಗದಿಪಡಿಸಿರುವ ದರಗಳ ವ್ಯತ್ಯಾಸ)

ಸದರಿ ಪ್ರಸ್ತಾವನೆಯನ್ನು ದಿನಾಂಕ 18.02.2021 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದಲ್ಲಿನ star classified hotel ಗಳಿಗೆ ದಿನಾಂಕ: 01.04.2021 ರಿಂದ "ಕೈಗಾರಿಕೆ" ಎಂದು ಸ್ಥಾನಮಾನ ನೀಡಲು ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಆದೇಶ ಹೊರಡಿಸಲು ಸಚಿವ ಸಂಪುಟವು ಅನುಮೋದನೆ ನೀಡಿದೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 86 ಎಸ್‌ಪಿಐ 2021, ಬೆಂಗಳೂರು, ದಿನಾಂಕ 04.03.2021**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ Star Classified Hotel ಗಳನ್ನು ದಿನಾಂಕ: 01.04.2021 ರಿಂದ "ಕೈಗಾರಿಕೆ" ಎಂದು ಸ್ಥಾನಮಾನ ನೀಡಿ, ಆದೇಶ ಹೊರಡಿಸಲಾಗಿದೆ.

Star Classified Hotel ಗಳು "ಕೈಗಾರಿಕೆ" ಎಂದು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರಿಂದ ಪ್ರಮಾಣ ಪತ್ರ ಪಡೆಯತಕ್ಕದ್ದು.

ಈ ಕುರಿತು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರು ಪ್ರವಾಸೋದ್ಯಮ ಇಲಾಖೆಯೊಂದಿಗೆ ಸಮಾಲೋಚಿಸಿ ಮಾರ್ಗಸೂಚಿಗಳನ್ನು ತಯಾರಿಸಿ, ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ FD 496 Exp-7/2020, ದಿನಾಂಕ 16.02.2021, ನಗರಾಭಿವೃದ್ಧಿ ಇಲಾಖೆ (ಬಿಬಿಎಂಪಿ) ಯ ಅನಧಿಕೃತ ಟಿಪ್ಪಣಿ ಸಂಖ್ಯೆ ನಅಇ 21 ಎಂ.ಎನ್.ಯು 2021, ದಿನಾಂಕ 02.02.2021, ಇಂಧನ ಇಲಾಖೆಯ ಟಿಪ್ಪಣಿ ಸಂಖ್ಯೆ ACS/EN/21, ದಿನಾಂಕ 16.02.2021 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ದಿನಾಂಕ 18.02.2021 ರಂದು ನಡೆದ ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ ಸಿ:70/2021ರ ಅನುಮೋದನೆಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

G. Nagaratnamma 4/3/2021
(ನಾಗರತ್ನಮ್ಮ ಜಿ)
ಪೀಠಾಧಿಕಾರಿ (ತಾಂತ್ರಿಕ ಕೋಶ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಈ ಇಲಾಖೆಗೆ ಕಳುಹಿಸಲು ಕೋರಿದೆ.
2. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" , ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.

4. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-01.

5. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-01.

6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-01.

7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-01.

8. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.

9. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.

10. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ನಂ.49, 2ನೇ ಮಹಡಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01 - **ಪ್ರವಾಸೋದ್ಯಮ ಇಲಾಖೆಗೆ ಸಂಬಂಧಿಸಿದ ಇಲಾಖೆ/ನಿಗಮ/ಮಂಡಳಿ/ಸಂಸ್ಥೆ/ಸಂಘ-ಸಂಸ್ಥೆಗಳಿಗೆ ಈ ಆದೇಶವನ್ನು ತಮ್ಮ ಕಛೇರಿ ಮುಖಾಂತರ ರವಾನಿಸಲು ಕೋರಿದೆ.**

11. ಆಯುಕ್ತರು, ವಾಣಿಜ್ಯ ತೆರಿಗೆ ಇಲಾಖೆ, ತೆರಿಗೆ ಭವನ, ಗಾಂಧಿನಗರ, ಬೆಂಗಳೂರು-09.

12. ವ್ಯವಸ್ಥಾಪಕ ನಿರ್ದೇಶಕರು, ಕೆಪಿಟಿಸಿಎಲ್, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.

13. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಮೆಸ್ಕಾಂ, ಚೆಸ್ಕಾಂ, ಹೆಸ್ಕಾಂ.

14. ಕರ್ನಾಟಕದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.

15. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.

16. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಸಿಆಸುಇ, ವಿಧಾನಸೌಧ, ಬೆಂಗಳೂರು-01.

17. ನಿರ್ದೇಶಕರು (ತಾಂತ್ರಿಕ ಕೋಶ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.

18. ಸಂಚಾಲಕರು, ಎಸ್‌ಎಲ್‌ಬಿಸಿ, ಬೆಂಗಳೂರು.

19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.